# ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ1[8]ಮಾ.ಹ:01:2016-17 ದಿನಾಂಕ:19ನೇ ಜುಲೈ 2016

## : ಸು ತ್ತೋ ಲೆ :

**ವಿಷಯ:** ರಾಜ್ಯದ ಎಲ್ಲಾ ಸಾರ್ವಜನಿಕ ಪ್ರಾಧಿಕಾರಿಗಳ ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರು, ಹುದ್ದೆ, ಕಛೇರಿ ವಿಳಾಸ, ದೂರವಾಣಿ ಸಂಖ್ಯೆ, ಇತ್ಯಾದಿ ವಿವರಗಳನ್ನೊಳಗೊಂಡ ವಿವರವಾದ ಮಾಹಿತಿಯನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ:17:ಪಿ.ಡಿ.ಬಿ:2015, ದಿ:20.02.2016.

\>>>>>

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಸಾರ್ವಜನಿಕ ಪ್ರಾಧಿಕಾರಿಗಳು, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ನೇಮಕ ಮಾಡಿರುವುದನ್ನು ಪರಿಷ್ಕರಿಸಿ, ಅನುಬಂಧದಲ್ಲಿ ನಮೂದಿಸಿರುವಂತೆ ದಿನಾಂಕ:01.04.2016 ರಿಂದ ಜಾರಿಗೆ ಬರುವಂತೆ ಅಧಿಸೂಚನೆ ಹೊರಡಿಸಿದೆ. ಅದರಂತೆ ಕೆಲಸ ನಿರ್ವಹಿಸಲು ಈ ಮೂಲಕ ಎಲ್ಲಾ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದೆ.

ಈ ಸಂಬಂಧ ಸಾರ್ವಜನಿಕ ಪ್ರಾಧಿಕಾರಿಗಳು, ಸಾರ್ವಜನಿಕ ಮಾಹಿತಿ ಅಧಿಕಾರಿಗಳು ನಿರ್ದೇಶನಾಲಯವಾರು ಮಾಹಿತಿಯನ್ನು ಈ ಕೆಳಕಂಡ ನಮೂನೆಯಲ್ಲಿ ಭರ್ತಿಮಾಡಿ, ಕ್ರೋಢೀಕರಿಸಿ, ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ಸಂಬಂಧಿಸಿದ ಅಧಿಕಾರಿಗಳಿಗೆ ಕ್ರೋಢೀಕೃತ ಮಾಹಿತಿಯನ್ನು ***ಕಡ್ಡಾಯವಾಗಿ*** ಇ-ಮೇಲ್ ಮೂಲಕ ಸಲ್ಲಿಸುವುದು. ನಂತರ ಸಾಫ್ಟ್ ಪ್ರತಿ ಹಾಗೂ ಹಾರ್ಡ್ ಪ್ರತಿಯಲ್ಲಿ ಸಲ್ಲಿಸುವುದು.

*01.* ಎಲ್ಲಾ ಸರ್ಕಾರಿ / ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಗಳ ಮುಖ್ಯೋಪಾಧ್ಯಾಯರು ಮತ್ತು ಶಾಲೆಯ ಹಿರಿಯ ಶಿಕ್ಷಕರು, ಇವರುಗಳ ಶಾಲಾವಾರು ಮಾಹಿತಿಯನ್ನು ಪೂರ್ಣ ವಿಳಾಸದೊಂದಿಗೆ ನಿರ್ದೇಶಕರು [ಪ್ರಾಥಮಿಕ ಶಿಕ್ಷಣ], ಇವರ ಇ-ಮೇಲ್ ವಿಳಾಸ prydirector.edu.sgkar@nic.in ಗೆ ಸಲ್ಲಿಸುವುದು.

| ಕ್ರ.ಸಂ | ಸರ್ಕಾರಿ / ಅನುದಾನಿತ ಶಾಲೆ / ಕಛೇರಿಯ ಪೂರ್ಣ ವಿಳಾಸ | ಸಾರ್ವಜನಿಕ ಮಾಹಿತಿ ಅಧಿಕಾರಿ | ಸಹಾಯಕ ಮಾಹಿತಿ ಅಧಿಕಾರಿ | ಕಛೇರಿ ದೂರವಾಣಿ ಸಂಖ್ಯೆ |
|---|---|---|---|---|
| 01 | 02 | 03 | 04 | 05 |

*02.* ಎಲ್ಲಾ ಸರ್ಕಾರಿ / ಅನುದಾನಿತ ಪ್ರೌಢ ಶಾಲೆಗಳ ಮುಖ್ಯೋಪಾಧ್ಯಾಯರು ಮತ್ತು ಶಾಲೆಯ ಮುಖ್ಯಶಿಕ್ಷಕರು, ಇವರುಗಳ ಶಾಲಾವಾರು ಮಾಹಿತಿಯನ್ನು ಪೂರ್ಣ ವಿಳಾಸದೊಂದಿಗೆ ನಿರ್ದೇಶಕರು [ಪ್ರೌಢ ಶಿಕ್ಷಣ], ಇವರ ಇ-ಮೇಲ್ ವಿಳಾಸ secdirector.edu.sgkar@nic.in ಗೆ ಸಲ್ಲಿಸುವುದು.

| ಕ್ರ.ಸಂ | ಸರ್ಕಾರಿ / ಅನುದಾನಿತ ಶಾಲೆ / ಕಛೇರಿಯ ಪೂರ್ಣ ವಿಳಾಸ | ಸಾರ್ವಜನಿಕ ಮಾಹಿತಿ ಅಧಿಕಾರಿ | ಸಹಾಯಕ ಮಾಹಿತಿ ಅಧಿಕಾರಿ | ಕಛೇರಿ ದೂರವಾಣಿ ಸಂಖ್ಯೆ |
|---|---|---|---|---|
| 01 | 02 | 03 | 04 | 05 |

*03.* ಎಲ್ಲಾ ಕ್ಷೇತ್ರ ಸಂಪನ್ಮೂಲ ಕೇಂದ್ರ ಬಿ.ಆರ್.ಸಿ ಸಮನ್ವಯಾಧಿಕಾರಿ / ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯ ವ್ಯವಸ್ಥಾಪಕರು, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು / ಜಿಲ್ಲಾ ಉಪನಿರ್ದೇಶಕರ ಕಛೇರಿಯ ಪತ್ರಾಂಕಿತ

ಸಹಾಯಕರು, ವಿಷಯಕ್ಕೆ ಸಂಬಂಧಪಟ್ಟ ಅಧೀಕ್ಷಕರು, ಜಿಲ್ಲಾ ಉಪನಿರ್ದೇಶಕರು / ಜಿಲ್ಲಾ ಯೋಜನಾ ಅನುಷ್ಠಾನಾಧಿಕಾರಿಗಳ ಕಛೇರಿಯ ಉಪಯೋಜನಾ ಸಮನ್ವಯಾಧಿಕಾರಿಗಳು, ಅಧೀಕ್ಷಕರು, ಉಪನಿರ್ದೇಶಕರು / ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಗಳ ಕಛೇರಿಯ ಸಹಾಯಕ ನಿರ್ದೇಶಕರು, ಅಧೀಕ್ಷಕರು, ಜಂಟಿ ನಿರ್ದೇಶಕರು ಮತ್ತು ಉಪನಿರ್ದೇಶಕರು / ಜಂಟಿ ನಿರ್ದೇಶಕರ ಕಛೇರಿ / ಕರ್ನಾಟಕ ಪ್ರಾದೇಶಿಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಕಾರ್ಯದರ್ಶಿ ಹಾಗೂ ಪದನಿಮಿತ್ತ ವಿಭಾಗೀಯ ಸಹನಿರ್ದೇಶಕರ ಕಛೇರಿ, ಬೆಂಗಳೂರು / ಮೈಸೂರು / ಗುಲ್ಬರ್ಗಾ / ಬೆಳಗಾವ ವಿಭಾಗ ಈ ಕಛೇರಿಗಳ ಹಿರಿಯ / ಸಹಾಯಕ ನಿರ್ದೇಶಕರು, ಅಧೀಕ್ಷಕರು ಇವರುಗಳ ಮಾಹಿತಿಯನ್ನು ಹಿರಿಯ ಸಹಾಯಕ ನಿರ್ದೇಶಕರು [ಸಿಬ್ಬಂದಿ], ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಇ-ಮೇಲ್ ವಿಳಾಸ est1cpi@gmail.com ಗೆ ಸಲ್ಲಿಸುವುದು.

***ಅನುಬಂಧ***

| ಕ್ರ.ಸಂ | ಕಛೇರಿಯ ಪೂರ್ಣ ವಿಳಾಸ | ಸಾರ್ವಜನಿಕ ಮಾಹಿತಿ ಅಧಿಕಾರಿ | ಸಹಾಯಕ ಮಾಹಿತಿ ಅಧಿಕಾರಿ | ಕಛೇರಿ ದೂರವಾಣಿ ಸಂಖ್ಯೆ |
|---|---|---|---|---|
| 01 | 02 | 03 | 04 | 05 |

*[ಎಸ್.ಕಾತ್ಯಾಯಿನಿದೇವಿ]*
ಜಂಟಿ ನಿರ್ದೇಶಕರು [ಆಡಳಿತ]

***ಇವರಿಗೆ:***

*01.* ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ ಜಿಲ್ಲೆ.

*02.* ರಾಜ್ಯದ ಎಲ್ಲಾ ವಿಭಾಗೀಯ ಸಹನಿರ್ದೇಶಕರುಗಳಿಗೆ.

*03.* ನಿರ್ದೇಶಕರು, ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ / ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ / ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ / ಕರ್ನಾಟಕ ಪಠ್ಯಪುಸ್ತಕ ಸಂಘ / ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತ ನಿರ್ದೇಶನಾಲಯ, ಇವರುಗಳಿಗೆ.

*04.* ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಕಳುಹಿಸುತ್ತಾ, ಸಂಬಂಧಿಸಿದ ಮಾಹಿತಿಯನ್ನು ಕ್ರೋಢೀಕರಿಸಿ ಅತೀ ಜರೂರಾಗಿ ಸಲ್ಲಿಸಲು ತಿಳಿಸಿದೆ.

*05.* ಹಿರಿಯ ಸಹಾಯಕ ನಿರ್ದೇಶಕರು [ಸಿಬ್ಬಂದಿ], ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ.

*06.* ಆಪ್ತ ಸಹಾಯಕರು, ಆಯುಕ್ತರ ಆಪ್ತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.

*07.* ಕಛೇರಿ ಪ್ರತಿ.